# ಕರ್ನಾಟಕ ವಿಧಾನ ಪರಿಷತ್

ಸದಸ್ಯರ ಹೆಸರು : ಶ್ರೀ ಎನ್ ರವಿಕುಮಾರ್
(ವಿಧಾನ ಸಭೆಯಿಂದ ಚುನಾಯಿತರಾದವರು)
ಚುಕ್ಕೆ ರಹಿತ ಪ್ರಶ್ನೆ ಸಂಖ್ಯೆ : 1016
ಉತ್ತರ ದಿನಾಂಕ : 18.12.2018

| ಕ್ರ.ಸಂ. | ಪ್ರಶ್ನೆಗಳು | ಉತ್ತರಗಳು |
|---|---|---|
| ಅ) | ದಾವಣಗೆರೆ ಜಿಲ್ಲೆ ಜಗಳೂರು ತಾಲ್ಲೂಕಿನ ಹುಚ್ಚಂಗಿಪುರ ಗ್ರಾಮದ ಜನತೆ ಕುಡಿಯುವ ನೀರಿಗೆ ಪರದಾಡುತ್ತಿರುವುದು 'ಸರ್ಕಾರದ ಗಮನಕ್ಕೆ ಬಂದಿದೆಯೇ ಕುಡಿಯುವ ನೀರು ಒದಗಿಸಲು ಸರ್ಕಾರ ಯಾವ ಕ್ರಮ ಕೈಗೊಂಡಿದೆ | ದಾವಣಗೆರೆ ಜಿಲ್ಲೆ ಜಗಳೂರು ತಾಲ್ಲೂಕಿನ ಹುಚ್ಚಂಗಿಪುರ ಗ್ರಾಮದಲ್ಲಿ 2816 ಜನಸಂಖ್ಯೆ ಇದ್ದು, ಪ್ರಸ್ತುತ 2 ಕಿರು ನೀರು ಸರಬರಾಜು ಯೋಜನೆ, 2 ಕೊಳವೆ ನೀರು ಸರಬರಾಜು ಯೋಜನೆಗಳು ಹಾಗೂ 10 ಕೈ ಪಂಪು ಕೊಳವೆ ಬಾವಿಗಳಿದ್ದು, ಇವುಗಳಲ್ಲಿ 1 ಕಿರು ನೀರು ಸರಬರಾಜು ಯೋಜನೆ, 1 ಕೊಳವೆ ನೀರು ಸರಬರಾಜು ಯೋಜನೆಗಳು ಹಾಗೂ 1 ಕೈ ಪಂಪು ಕೊಳವೆ ಬಾವಿ ಕಾರ್ಯನಿರ್ವಹಿಸುತ್ತಿವೆ. ಹಾಗೂ 2017-2018ನೇ ಸಾಲಿನ ಎನ್.ಆರ್.ಡಿ.ಡಬ್ಲ್ಯೂ.ಪಿ ವಿಶೇಷ ಅಭಿವೃದ್ಧಿ ಯೋಜನೆಯಲ್ಲಿ ಎರಡು ಕಿರು ಸರಬರಾಜು ಯೋಜನೆ ಕಾಮಗಾರಿಗಳನ್ನು ಕೈಗೊಳ್ಳಲಾಗಿದೆ ಮತ್ತು 2018-19ನೇ ಸಾಲಿನ ಸಿ.ಆರ್.ಎಫ್ ಯೋಜನೆಯಡಿ ಪೈಪ್‌ಲೈನ್ ದುರಸ್ಥಿ ಕಾಮಗಾರಿಯು ಅನುಮೋದನೆಗೆಯಾಗಿದ್ದು, ಕಾಮಗಾರಿ ಪ್ರಗತಿಯಲ್ಲಿದೆ. |
| ಆ) | ಸದರಿ ಗ್ರಾಮದಲ್ಲಿ ಕುಡಿಯಲು ಫ್ಲೋರೈಡ್‌ಯುಕ್ತ ನೀರು ದೊರೆಯುತ್ತಿದ್ದು ಇದರಿಂದ ಗ್ರಾಮದ ಜನತೆ ಸಮಸ್ಯೆಗಳನ್ನು ಎದುರುಸುತ್ತಿರುವುದರ ಸರ್ಕಾರದ ಗಮನಕ್ಕೆ ಬಂದಿದೆಯೇ. ಈ ಗ್ರಾಮದಲ್ಲಿ ಕುಡಿಯುವ ನೀರಿಗೆ ಸಂಬಂಸಿದಂತೆ ಆರ್.ಓ. ಪ್ಲಾಂಟ್ ನಿರ್ಮಿಸಲು ಸರ್ಕಾರ ಯಾವ ಕ್ರಮ ಕೈಗೊಂಡಿದೆ. | ಬಂದಿದೆ.<br>ಸದರಿ ಗ್ರಾಮದಲ್ಲಿ ಪ್ಲೋರೈಡ್‌ಯುಕ್ತ ನೀರು ಇರುವ ಕಾರಣ ಶುದ್ಧ ಕುಡಿಯುವ ನೀರಿನ ಘಟಕ ನಿರ್ಮಿಸಿದ್ದು, ಪ್ರಸ್ತುತ ಘಟಕವು ಕಾರ್ಯನಿರ್ವಹಿಸುತ್ತಿದೆ. |
| ಇ) | ಸ್ವಾತಂತ್ರ್ಯ ಬಂದು 70 ವರ್ಷಗಳಾದರೂ ಗ್ರಾಮದ ಜನತೆ ಮತ್ತು ಜಾನುವಾರುಗಳಿಗೆ ಕುಡಿಯುವ ನೀರು ಒದಗಿಸಲು ಸಾಧ್ಯವಾಗದಿರಲು ಕಾರಣವೇನು; ಕುಡಿಯುವ ನೀರು ಒದಗಿಸಲು ಯಾವ ಯಾವ ಯೋಜನೆಗಳು ಜಾರಿಯಲ್ಲಿವೆ.. | ಸದರಿ ಗ್ರಾಮದಲ್ಲಿ ನಿರಂತರ ಜಲಮೂಲದ ಸಮಸ್ಯೆಯಿದ್ದು, ಪ್ರಸ್ತಾವಿತ "ಜಲಧಾರೆ" ಕಾರ್ಯಕ್ರಮದಡಿ ಸಮಸ್ಯೆ ಬಗೆಹರಿಸಲು ಕ್ರಮವಹಿಸಲಾಗುವುದು. |

ಸಂ:ಗ್ರಾಅಪ 110 ಗ್ರಾನೀಸ(3)18

(ಕೃಷ್ಣ ಬೈರೇಗೌಡ)
ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್
ಹಾಗೂ ಕಾನೂನು ಮತ್ತು ಸಂಸದೀಯ ವ್ಯವಹಾರಗಳ ಸಚಿವರು